**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಕ್ಯಾನ್ಸರ್ ಕಾಯಿಲೆಯಿಂದ ಬಳಲುತ್ತಿರುವ ಸರ್ಕಾರಿ ನೌಕರರು ವೈದ್ಯರ ಸಲಹೆಯ ಮೇರೆಗೆ ಒಳಪಡುವ ಕಿಮೋ/ರೇಡಿಯೋಥೆರಪಿ ಚಿಕಿತ್ಸೆಯ ಪ್ರಕರಣಗಳಲ್ಲಿ ವಿಶೇಷ ಸಾಂದರ್ಭಿಕ ರಜೆಯ ಮಂಜೂರಾತಿ ಬಗ್ಗೆ.

**ಓದಲಾಗಿದೆ:** ಪತ್ರ ಸಂಖ್ಯೆ: ಜಿಇಎ/625/2020, ದಿನಾಂಕ: 26.08.2020 ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಪಾರ್ಕ್, ಬೆಂಗಳೂರು.

**ಪ್ರಸ್ತಾವನೆ:**

ರಾಜ್ಯದಲ್ಲಿ ಕರ್ತವ್ಯವನ್ನು ನಿರ್ವಹಿಸುತ್ತಿರುವ ಕೆಲವು ಸರ್ಕಾರಿ ನೌಕರರು ಕ್ಯಾನ್ಸರ್ ಕಾಯಿಲೆಗೆ ಸಂಬಂಧಿಸಿದಂತೆ ವೈದ್ಯರ ಸಲಹೆಯ ಮೇರೆಗೆ ಕಿಮೋ/ರೇಡಿಯೋ ಥೆರಪಿಯಂತಹ ಚಿಕಿತ್ಸೆಗೆ ಒಳಪಡಬೇಕಿದ್ದು, ಆ ನಿಮಿತ್ತವಾಗಿ ಕಡ್ಡಾಯವಾಗಿ ವಿಶ್ರಾಂತಿಯನ್ನು ಪಡೆಯಬೇಕಿರುವ ಅವಶ್ಯಕತೆಯಿರುವುದರ ಮೇರೆಗೆ, ಈ ನಿಮಿತ್ತವಾಗಿ ಪಡೆಯುವ ಚಿಕಿತ್ಸೆ ಮತ್ತು ವಿಶ್ರಾಂತಿಯ ಅಗತ್ಯತೆಯಿಂದಾಗಿ ಕಛೇರಿಗೆ ಹಾಜರಾಗಲು ಕಷ್ಟ ಸಾಧ್ಯವಾದ್ದರಿಂದ, ಈ ನಿಮಿತ್ತದ ಅವಧಿಯನ್ನು ಸಕ್ಷಮ ವೈದ್ಯಕೀಯ ಪ್ರಾಧಿಕಾರವು ನೀಡುವ ಪ್ರಮಾಣಪತ್ರವನ್ನು ಹಾಜರು ಪಡಿಸುವ ಷರತ್ತಿಗೊಳಪಟ್ಟ ವಿಶೇಷ ಸಾಂದರ್ಭಿಕ ರಜೆಯನ್ನಾಗಿ ಪರಿಗಣಿಸುವಂತೆ, ಉಲ್ಲೇಖದಲ್ಲಿ ಓದಲಾಗಿರುವ ಪತ್ರದಲ್ಲಿ ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಪಾರ್ಕ್, ಬೆಂಗಳೂರು ಇವರು ಕೋರಿರುವುದಾಗಿದೆ. ವಿಷಯವನ್ನು ಸರ್ಕಾರವು ಪರಿಶೀಲಿಸಿದ್ದು, ಅದರಂತೆ ಈ ಕೆಳಕಂಡ ಆದೇಶವನ್ನು ಹೊರಡಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಆಇ 8(ಇ) ಸೇನಿಸೇ 2020 ಬೆಂಗಳೂರು, ದಿನಾಂಕ:22.06.2021**

ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ಅನಬಂಧ-ಬಿ ರಲ್ಲಿನ ನಿಯಮ 11(ಐ)ರ ನಂತರದಲ್ಲಿ, ಈ ಆದೇಶವನ್ನು ಹೊರಡಿಸಿದ ದಿನಾಂಕದಿಂದ ಜಾರಿಗೊಳ್ಳುವಂತೆ ನಿಯಮ 11(ಜೆ) ಎಂಬ ಹೊಸ ನಿಯಮವನ್ನು ಸೇರ್ಪಡೆಗೊಳಿಸಿದೆ:

"ಜೆ) ಕ್ಯಾನ್ಸರ್ ಕಾಯಿಲೆಯಿಂದ ಬಳಲುತ್ತಿದ್ದು ಚಿಕಿತ್ಸಾ ತಜ್ಞರು ರೂಪಿಸುವ ಯೋಜನೆಯನುಸಾರ ಪಡೆಯುವ ಕಿಮೋ/ರೇಡಿಯೋ ಥೆರಪಿ ಚಿಕಿತ್ಸೆ ಮತ್ತು ಸಂಬಂಧದಲ್ಲಿ ಅಗತ್ಯವಾಗುವ ವಿಶ್ರಾಂತಿಯ ಅವಧಿಯ ದಿನಗಳಿಗೆ, ಸಕ್ಷಮ ವೈದ್ಯಕೀಯ ಪ್ರಾಧಿಕಾರದಿಂದ ಪ್ರಮಾಣ ಪತ್ರವನ್ನು ಪಡೆದು ಒದಗಿಸುವ ಷರತ್ತಿಗೊಳಪಟ್ಟು, ಈ ಚಿಕಿತ್ಸೆಯ ಅವಧಿಯಲ್ಲಿ ಮಾತ್ರ ಗರಿಷ್ಠ ಆರು ತಿಂಗಳುಗಳ ಮಿತಿಗೊಳಪಟ್ಟು ವಿಶೇಷ ಸಾಂದರ್ಭಿಕ ರಜೆಯನ್ನು ಅನುಮತಿಸತಕ್ಕದ್ದು".

**ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ**
**ಮತ್ತು ಅವರ ಹೆಸರಿನಲ್ಲಿ,**

Swarna B.S.
**(ಬಿ.ಎಸ್.ಸುವರ್ಣ)**
**ಸರ್ಕಾರದ ಉಪಕಾರ್ಯದರ್ಶಿ**
**ಆರ್ಥಿಕ ಇಲಾಖೆ (ಸೇವೆಗಳು-1)**

**ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 50 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು ಕೋರಿ ಕಳುಹಿಸಿದೆ.**

**ಪ್ರತಿ:**

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ಎಸ್ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಪೋಸ್ಟ್‌ಬಾಕ್ಸ್ ಸಂಖ್ಯೆ-5398, ಬೆಂಗಳೂರು-560001

...2/-

Scanned with CamScanner

2. ಮಹಾಲೇಖಪಾಲರು (ಇ & ಆರ್‌ಎಸ್‌ಎ) ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಪೋಸ್ಟ್‌ಬಾಕ್ಸ್ ಸಂಖ್ಯೆ–5398, ಬೆಂಗಳೂರು–560001
3. ಮಹಾಲೇಖಪಾಲರು (ಎ & ಇ), ಕರ್ನಾಟಕ, ಪೋಸ್ಟ್‌ಬಾಕ್ಸ್ ಸಂಖ್ಯೆ–5329/5369, ಪಾರ್ಕ್ ಹೌಸ್ ರೋಡ್, ಬೆಂಗಳೂರು.
4. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು/ಅಪರಮುಖ್ಯ ಕಾರ್ಯದರ್ಶಿಗಳು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
6. ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ.
7. ಎಲ್ಲಾ ಜಿಲ್ಲಾಧಿಕಾರಿಗಳು.
8. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಮೈಸೂರು/ಬೆಳಗಾವಿ/ಗುಲ್ಬರ್ಗ.
9. ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
10. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚನ್ಯಾಯಾಲಯ, ಬೆಂಗಳೂರು.
11. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
12. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
13. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
14. ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ/ವಿಧಾನ ಪರಿಷತ್ತು, ಬೆಂಗಳೂರು.
15. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
16. ಯೋಜನಾ ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸಸೌಧ, ಬೆಂಗಳೂರು.
17. ಪ್ರಾಜೆಕ್ಟ್ ಆಫೀಸರ್, ಹೆಚ್.ಆರ್.ಎಂ.ಎಸ್, ಕೊಠಡಿ ಸಂಖ್ಯೆ:145–ಎ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
18. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.
19. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
20. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
21. ಕರ್ನಾಟಕ ಸರ್ಕಾರಿ ಸಚಿವಾಲಯದ ಗ್ರಂಥಾಲಯ; ವಿಧಾನ ಮಂಡಲದ ಗ್ರಂಥಾಲಯ.
22. ವಾರಪತ್ರ/ಶಾಖೆಯ ರಕ್ಷಾ ಕಡತ.

ಕ್ರಮ ಸಂಖ್ಯೆ:1 ರಿಂದ 3 ಹಾಗೂ 10 ರಿಂದ 17 ರವರೆಗೆ ನಮೂದಿತವಾದ ಅಧಿಕಾರಿಗಳಿಗೆ ಪತ್ರದ ಮೂಲಕ। ಕರ್ನಾಟಕ ಸರ್ಕಾರದ ಅಧಿಕೃತ ಅಂತರ್ಜಾಲ ತಾಣ www.finance.karnataka.gov.in ವೀಕ್ಷಿಸಿ.

Scanned with CamScanner